**<u>ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ವೈ.ಎಂ. ಸತೀಶ್, ಇವರು ನೀಡಿರುವ ಶೂನ್ಯ ವೇಳೆಯ ಸೂಚನೆಗೆ ಸರ್ಕಾರದ ಹೇಳಿಕೆ</u>**

**<u>ಸೂಚನೆ:-</u>**

ದಿನಾಂಕ:06/07/2023ರ ಕನ್ನಡ ಪ್ರಭ ದಿನ ಪತ್ರಿಕೆಯಲ್ಲಿ ವರದಿಯಾಗಿರುವ ವಿಷಯದಂತೆ, ಬಳ್ಳಾರಿ ಜಿಲ್ಲೆಯ, ಜಿಲ್ಲಾಡಳಿತ ಭವನವನ್ನು ಉದ್ಘಾಟನೆ ಮಾಡಿ ಸುಮಾರು 6 ತಿಂಗಳು ಕಳೆದರು ಸಹ, ಈ ನೂತನ ಜಿಲ್ಲಾಡಳಿತ ಭವನಕ್ಕೆ ಸರ್ಕಾರದ ಇಲಾಖೆಗಳು ಸ್ಥಳಾಂತರ ಗೊಂಡಿರುವುದಿಲ್ಲ. ಅಲ್ಲದೆ ಇದರಲ್ಲಿ ಹಲವು ಸರ್ಕಾರಿ ಕಚೇರಿಗಳು ಬಾಡಿಗೆ ಕಟ್ಟಡದಲ್ಲಿ ನಿರ್ವಹಿಸುತ್ತಿರುತ್ತವೆ. ಇದರಿಂದಾಗಿ ಸರ್ಕಾರಕ್ಕೆ ದುಬಾರಿ ಬಾಡಿಗೆಯ ಹೊರೆಯು ಹೆಚ್ಚಿದ್ದು, ಈ ಸರ್ಕಾರಿ ಕಛೇರಿಗಳನ್ನು ಕೂಡಲೆ ಜಿಲ್ಲಾಡಳಿತ ಭವನಕ್ಕೆ ಸ್ಥಳಾಂತರ ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**<u>ಹೇಳಿಕೆ:-</u>**

ಬಳ್ಳಾರಿ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡ ಕಾಮಗಾರಿಯನ್ನು ರೂ.25.00 ಕೋಟಿಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಮುಂದುವರೆದು, ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಒಟ್ಟು ರೂ.24.86 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಅದರಂತೆ, ಬಳ್ಳಾರಿ ಜಿಲ್ಲೆಯಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡದ ಕಾಮಗಾರಿಯು ಪೂರ್ಣಗೊಂಡಿದ್ದು, ಸದರಿ ಜಿಲ್ಲಾ ಸಂಕೀರ್ಣ ಕಟ್ಟಡದಲ್ಲಿ 18 ಇಲಾಖೆಗಳ ಪೈಕಿ ಈಗಾಗಲೇ ಬಳ್ಳಾರಿ ತಹಶೀಲ್ದಾರರವರ ಕಛೇರಿ, ಆಯುಕ್ತರು, ಹಿಂದೂ ಧಾರ್ಮಿಕದತ್ತಿ ಇಲಾಖೆ, ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಉಪ ನಿರ್ದೇಶಕರು, ಖಜಾನೆ ಇಲಾಖೆ, ಜಿಲ್ಲಾ ಕೌಲಶ್ಯ ಅಭಿವೃದ್ಧಿ ಹಾಗೂ ಉದ್ಯೋಗ ಕೇಂದ್ರ, ಸಹಾಯಕ ನಿರ್ದೇಶಕರು, ಸಣ್ಣ ಉಳಿತಾಯ ಮತ್ತು ಪಿಂಚಣಿ ಇಲಾಖೆ, ಜಂಟಿ ನಿರ್ದೇಶಕರು, ಲೆಕ್ಕಪರಿಶೋಧನಾ ವರ್ತುಲ ಇಲಾಖೆ, ಜಂಟಿ ನಿರ್ದೇಶಕರು, ಸ್ಥಳೀಯ ಲೆಕ್ಕಪರಿಶೋಧನಾ ಇಲಾಖೆ, ಉಪ ಆಯುಕ್ತರು, ಅಬಕಾರಿ ಇಲಾಖೆ, ಉಪ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಉಪ ನಿರ್ದೇಶಕರು, ಜವಳಿ ಮತ್ತು ಕೈಮಗ್ಗ ಇಲಾಖೆ, ಉಪ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಮತ್ತು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಇಲಾಖೆ ಒಟ್ಟು 12 ಇಲಾಖೆಗಳು ಸ್ಥಳಾಂತರಗೊಂಡು ಕಾರ್ಯನಿರ್ವಹಿಸುತ್ತಿವೆ ಮತ್ತು ಉಳಿದ 6 ಇಲಾಖೆಗಳು ಸ್ಥಳಾಂತರಗೊಳ್ಳುವ ಕಾರ್ಯವು ಪ್ರಗತಿಯಲ್ಲಿದ್ದು, ಅತೀ ಶೀಘ್ರವಾಗಿ ಸದರಿ ಇಲಾಖೆಗಳನ್ನು ಸ್ಥಳಾಂತರಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

**(ಆರ್‌ಡಿ 54 ಡಬ್ಲ್ಯೂಬಿಆರ್ 2023)**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು.